# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :: 266
ಸದಸ್ಯರ ಹೆಸರು :: ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ :: 06.12.2023
ಉತ್ತರಿಸುವ ಸಚಿವರು :: ಕಂದಾಯ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಕ್ರಮ/ಸಕ್ರಮದ ಮಂಜೂರಾತಿಗಾಗಿ ಇರುವ ಮಾನದಂಡಗಳೇನು; | ಅಕ್ರಮ/ಸಕ್ರಮದ ಮಂಜೂರಾತಿಗಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94-ಎ, 94-ಬಿ ಮತ್ತು 94-ಎ(4) ರಡಿ ಕ್ರಮವಾಗಿ ನಮೂನೆ-50, ನಮೂನೆ-53 ಮತ್ತು ನಮೂನೆ-57ರಡಿ ಸ್ವೀಕರಿಸಿದ ಅರ್ಜಿಗಳನ್ನು ಮಂಜೂರಾತಿ ಮಾಡಲು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108(ಎಫ್) ರಡಿಯಲ್ಲಿ ಕಲ್ಪಿಸಿರುವ ಅವಕಾಶದಂತೆ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ.<br><br>1. ಅರ್ಜಿದಾರನ ವಯಸ್ಸು ಕನಿಷ್ಠ 18 ವರ್ಷಗಳಾಗಿರಬೇಕು.<br>2. ಅರ್ಜಿದಾರನು ಭೂಮಿಯು ಇರುವ ಅಥವಾ ಪಕ್ಕದಲ್ಲಿರುವ ತಾಲ್ಲೂಕಿನಲ್ಲಿ ತಾಲ್ಲೂಕಿನ ಪರಿಮಿತಿಯೊಳಗೆ ಖಾಯಂ ನಿವಾಸಿಯಾಗಿರಬೇಕು;<br>3. ಅರ್ಜಿದಾರನು ಖುದ್ದಾಗಿ ಸಾಗುವಳಿ ಮಾಡುವ ಸದ್ಭಾವಿಕ ಕೃಷಿಕ ಮತ್ತು ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ ಉಪಬಂಧಗಳ ಮೇರೆಗೆ ಭೂಮಿಯನ್ನು ಹೊಂದುವುದು ಮತ್ತು ಪಡೆಯುವುದರಿಂದ ನಿಷಿದ್ಧನಾಗತಕ್ಕದ್ದಲ್ಲ;<br>4. ಅರ್ಜಿದಾರನು ಹದಿನಾಲ್ಕನೇ ಏಪ್ರಿಲ್ 1990ರ ದಿನಕ್ಕೆ ಕಡೆಯಪಕ್ಷ ಹಿಂದಿನ ಮೂರು ವರ್ಷಗಳು ಕಡಿಮೆಯಿಲ್ಲದ ಅವಧಿಯ ನಿರಂತರ ಭೂಮಿಯ ಅನಧಿಕೃತ ಅಧಿಭೋಗನಾಗಿರಬೇಕು;<br>5. 2005ರ ಜನವರಿ ಮೊದಲ ದಿನಕ್ಕೆ ಮೂರು ವರ್ಷಕ್ಕಿಂತ ಕಡಿಮೆ ಇಲ್ಲದ ಅವಧಿಯವರೆಗೆ ನಿರಂತರ ಅರ್ಜಿ ಸಲ್ಲಿಸಿದ ಅರ್ಜಿದಾರರು ಅನಧಿಕೃತವಾಗಿ ಆಕ್ರಮಿಸಿಕೊಂಡ ಭೂಮಿಯಾಗಿದೆ.<br>6. ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳ ಸಂದರ್ಭದಲ್ಲಿ, ಅಂಥ ಅವಧಿಯು ಒಂದು ವರ್ಷಕ್ಕಿಂತ ಕಡಿಮೆಯಿರತಕ್ಕದ್ದಲ್ಲ. |
| ಆ) | ಬೀದರ್ ಜಿಲ್ಲೆಯಲ್ಲಿ ಅಕ್ರಮ/ಸಕ್ರಮದಲ್ಲಿ ತಾಲ್ಲೂಕುವಾರು ಬಂದಿರುವ ಅರ್ಜಿಗಳೆಷ್ಟು; ಇವುಗಳು ಯಾವ ಹಂತದಲ್ಲಿದೆ; (ತಾಲ್ಲೂಕುವಾರು ವಿವರ ನೀಡುವುದು) | ಬೀದರ್ ಜಿಲ್ಲೆಯಲ್ಲಿ ಅಕ್ರಮ/ಸಕ್ರಮದಡಿ ತಾಲ್ಲೂಕುವಾರು ಬಂದಿರುವ ಅರ್ಜಿಗಳ ವಿವರವನ್ನು **ಅನುಬಂಧದಲ್ಲಿ** ಲಗತ್ತಿಸಿದೆ. ವಿಲೇವಾರಿಯಾಗದೇ ಬಾಕಿ ಉಳಿದಿರುವ ಅರ್ಜಿಗಳನ್ನು ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ರಚನೆಯಾದ ನಂತರ |

| | | |
|---|---|---|
| | | ಇತ್ಯರ್ಥ ಪಡಿಸಲಾಗುವುದು. |
| ಇ) | ಬೀದರ್ ಜಿಲ್ಲೆಯ ಸ್ಥಾನವನ್ನು ರಾಜ್ಯದಲ್ಲಿರುವ ಬೇರೆ ಜಿಲ್ಲೆಗಳಿಗೆ ಹೋಲಿಸಿದಾಗ ಬಂದಿರುವ ಕಡತ ಮತ್ತು ಇತ್ಯರ್ಥವಾದ ಕಡತಗಳ ಶೇಕಡಾವಾರು ವಿವರ ನೀಡುವುದು? | ಬೀದರ್ ಜಿಲ್ಲೆಯಲ್ಲಿ ಸ್ವೀಕೃತವಾಗಿ ಇತ್ಯರ್ಥವಾದ ಕಡತಗಳ ಶೇಕಡಾವಾರು ಪ್ರಮಾಣ 80.54%ರಷ್ಟು ಇದ್ದು, ಬೀದರ್ ಜಿಲ್ಲೆಯು ರಾಜ್ಯದಲ್ಲಿ ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಕಡತ ವಿಲೇವಾರಿಯಲ್ಲಿ 10ನೇ ಸ್ಥಾನದಲ್ಲಿರುತ್ತದೆ. |

**ಆರ್‌ಡಿ 12 ಎಲ್‌ಜಿಐ 2023**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು